**ಕರ್ನಾಟಕ ಸರ್ಕಾರ**

**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಬೆಂಗಳೂರು**

**ಪತ್ರಿಕಾ ಪ್ರಕಟಣೆ**

1) ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾರ್ಖಾನೆಗಳು, ಪ್ಲಾಂಟೇಶನ್‌ಗಳು, ಮೋಟಾರು ವಾಹನ ಸಂಸ್ಥೆಗಳು ಹಾಗೂ 50 ಮತ್ತು ಅದಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು/ITBT ಸಂಸ್ಥೆಗಳು, ಚಾರಿಟಬಲ್ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಕರ್ನಾಟಕ ಸೊಸೈಟಿ ಕಾಯ್ದೆ 1960 ರಡಿಯಲ್ಲಿ ನೊಂದಣಿಯಾಗಿರುವ ಸಂಘಗಳು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರ ವಂತಿಕೆ ಪಾವತಿಸ ಬೇಕಾಗಿರುತ್ತದೆ. **ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 5 ಶಾಸನ 2016, ಬೆಂಗಳೂರು, ದಿನಾಂಕ: 06.04.2017 ರ ತಿದ್ದುಪಡಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 18 ಶಾಸನ 2020, ಬೆಂಗಳೂರು ದಿನಾಂಕ: 01.12.2020 ರಂದು ನಿರಸನಗೊಳಿಸಿ ಕರ್ನಾಟಕ ರಾಜ್ಯದ ವಿಶೇಷ ರಾಜ್ಯ ಪತ್ರಿಕೆಯಲ್ಲಿ ಪ್ರಕಟಗೊಳಿಸಲಾಗಿದೆ. ಈ ತಿದ್ದುಪಡಿ ಕಾಯ್ದೆಯನ್ನು ಮೂಲ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965 ಸೆಕ್ಷನ್ 7ಎ ಗೆ ಸೇರಿಸಲಾಗಿದೆ.** ಆದ್ದರಿಂದ ಕಾರ್ಮಿಕರು ರೂ.20/- ಮಾಲೀಕರು ರೂ.40/- ರಂತೆ ಒಟ್ಟು **ರೂ 60/-** ರಂತೆ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿಗೆ ವಂತಿಗೆ ಪಾವತಿಸುವುದು ಕಡ್ಡಾಯವಾಗಿರುತ್ತದೆ.

2) ಈ ಕಾಯ್ದೆಯಡಿಯಲ್ಲಿ ಆನ್‌ಲೈನ್ ಮುಖಾಂತರ ವಂತಿಗೆ ಪಾವತಿಸಬೇಕಾದ ವೆಬ್‌ಸೈಟ್ ವಿಳಾಸ
**www.klwb.karnataka.gov.in**

**ವಂತಿಗೆ ಪಾವತಿಗೆ ಕಡೆಯ ದಿನಾಂಕ: 15-01-2021 (2020 ನೇ ಕ್ಯಾಲೆಂಡರ್ ವರ್ಷಕ್ಕೆ)**

**ನಿಯಮ ಪಾಲಿಸದ ಸಂಸ್ಥೆಗಳಿಗೆ ಮೊದಲ 3 ತಿಂಗಳಿಗೆ ಶೇಕಡ 12% ರಂತೆ ಹಾಗೂ ನಂತರದ ತಿಂಗಳಿಗೆ ಶೇಕಡ 18% ಬಡ್ಡಿಯನ್ನು ದಂಡವಾಗಿ ವಿಧಿಸಬಹುದು, ಹಾಗು ಕಲ್ಯಾಣ ಆಯುಕ್ತರಿಂದ ತಪಾಸಣೆ/ತನಿಖೆಗೆ ಒಳಪಡಬೇಕಾಗುತ್ತದೆ.**

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: **8277291175, 8277120505, 080-23475188** ಮೂಲಕ ಸಂಪರ್ಕಿಸಬಹುದು.

**ಎಂ.ಎಸ್. ಚಿದಾನಂದ**
**ಕಲ್ಯಾಣ ಆಯುಕ್ತರು**
ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ
ಯಶವಂತಪುರ, ಬೆಂಗಳೂರು.